ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೈಸೂರು ಜಿಲ್ಲೆ, ಕೆ.ಆರ್.ನಗರ ತಾಲ್ಲೂಕು, ಸಾಲಿಗ್ರಾಮ ಹೋಬಳಿ, ಸಾಲಿಗ್ರಾಮ ಗ್ರಾಮದ ಸರ್ವೆ ನಂ.738/7 ರಲ್ಲಿ 1.00 ಎಕರೆ ಜಮೀನನ್ನು ಅಗ್ನಿಶಾಮಕ ಠಾಣೆ ಸ್ಥಾಪಿಸುವ ಮತ್ತು ಸಿಬ್ಬಂದಿ ವಸತಿ ಗೃಹ ನಿರ್ಮಾಣದ ಉದ್ದೇಶಕ್ಕಾಗಿ ಅಗ್ನಿಶಾಮಕ ಇಲಾಖೆಗೆ ಹಸ್ತಾಂತರಿಸುವ ಬಗ್ಗೆ.

****

**ಓದಲಾಗಿದೆ:**

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿನಿ/ಆ/ಸಿ.13/ಸಿಆರ್.62/2018-19/6877, ದಿನಾಂಕ:07-03-2019.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿನಿ/ಆ/ಸಿ.13/ಸಿಆರ್.62/2018-19/337-39, ದಿನಾಂಕ:03-05-2019.
3. ಒಳಾಡಳಿತ ಇಲಾಖೆ (ಪೋಲೀಸ್ ಸಹಾಯಕ ಸೇವೆಗಳು)ಯ ಸರ್ಕಾರಿ ಆದೇಶ ಸಂಖ್ಯೆ:ಒಇ 20 ಕಅಸೇ 2019, ಬೆಂಗಳೂರು, ದಿನಾಂಕ:08-02-2022.
4. ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ರವರ ಪತ್ರ ಸಂಖ್ಯೆ: ಸಿಬ್ಬಂದಿ (5) 23/2017-18, ದಿನಾಂಕ:31-03-2022.

**ಪ್ರಸ್ತಾವನೆ:**

ಮೇಲೆ ಓದಲಾದ (1) ಮತ್ತು (2)ರ ಪತ್ರಗಳಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಇವರು ಮೈಸೂರು ಜಿಲ್ಲೆ, ಕೆ.ಆರ್.ನಗರ ತಾಲ್ಲೂಕು, ಸಾಲಿಗ್ರಾಮ ಹೋಬಳಿ, ಸಾಲಿಗ್ರಾಮ ಗ್ರಾಮದ ಸರ್ವೆ ನಂ.738/7 ರಲ್ಲಿ ಕಾವೇರಿ ನೀರಾವರಿ ನಿಗಮ ನಿಯಮಿತಕ್ಕೆ ಸೇರಿದ 2-00 ಎಕರೆ ಹಾರಂಗಿ ಯೋಜನೆಯ ಕ್ವಾಟರ್ಸ್‌ಗಾಗಿ ಸ್ವಾಧೀನಪಡಿಸಿಕೊಂಡಿರುವ ಜಮೀನಿನ ಪೈಕಿ 1-00 ಎಕರೆ ಜಾಗವನ್ನು ಅಗ್ನಿಶಾಮಕ ಠಾಣೆ ಮತ್ತು ಸಿಬ್ಬಂದಿ ವಸತಿ ಗೃಹ ನಿರ್ಮಾಣದ ಉದ್ದೇಶಕ್ಕಾಗಿ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಸೆಕ್ಷನ್-71ರಡಿ ಕಾಯ್ದಿರಿಸುವಂತೆ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ರವರು ದಿನಾಂಕ:19-06-2018 ರಲ್ಲಿ ಕೋರಿರುತ್ತಾರೆ ಎಂದು ವರದಿ ಮಾಡಿರುತ್ತಾರೆ.

2. ದಿನಾಂಕ:01-02-2019ರಂದು ನಡೆದ 67ನೇ ಮಂಡಳಿ ಸಭೆಯಲ್ಲಿ, ಅಗ್ನಿಶಾಮಕ ಠಾಣೆ ಸ್ಥಾಪಿಸಲು ಮೈಸೂರು ಜಿಲ್ಲೆ, ಕೆ.ಆರ್.ನಗರ ತಾಲ್ಲೂಕು, ಸಾಲಿಗ್ರಾಮ ಹೋಬಳಿ, ಸಾಲಿಗ್ರಾಮ ಗ್ರಾಮದ ಸ.ನಂ.738/7 ರಲ್ಲಿ 1-00 ಎಕರೆ ಜಮೀನು ಹಾಗೂ ಇದರಲ್ಲಿರುವ ಕಟ್ಟಡಗಳ ಒಟ್ಟಾರೆ ಮೊತ್ತ ರೂ.16,28,818/- ಗಳನ್ನು ಪಡೆದು ಕ್ರಯದ ಆಧಾರದ ಮೇಲೆ ಸದರಿ ಜಮೀನನ್ನು ಅಗ್ನಿಶಾಮಕ ಇಲಾಖೆಗೆ ಹಸ್ತಾಂತರಿಸಲು ಅನುಮೋದಿಸಿದೆಯೆಂದು ತಿಳಿಸುತ್ತಾ, ಪ್ರಸ್ತಾವನೆಗೆ ಸಂಬಂಧಿಸಿದ ಆರ್.ಟಿ.ಸಿ., ಸ್ಕೆಚ್, ಲೆಕ್ಕಾಚಾರದ ತಃಖ್ತೆ, ಚೆಕ್ ಲಿಸ್ಟ್, ಸಮ್ಮತಿ ಪತ್ರ, ಉಪ ನೋಂದಣಾಧಿಕಾರಿಗಳ ಮಾರ್ಗಸೂಚಿ ಬೆಲೆ ಮತ್ತು ಮೌಲ್ಯ ಮಾಪನ ವಿವರಗಳೊಂದಿಗೆ ಪ್ರಸ್ತಾವನೆಯನ್ನು ಶಿಫಾರಸ್ಸು ಮಾಡಿ ಮುಂದಿನ ಕ್ರಮಕ್ಕಾಗಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ಸಲ್ಲಿಸಿರುತ್ತಾರೆ.

I/265777/2022

3. ಮೇಲೆ ಓದಲಾದ (3)ರ ಸರ್ಕಾರಿ ಆದೇಶದಲ್ಲಿ, ಒಳಾಡಳಿತ ಇಲಾಖೆ (ಪೋಲೀಸ್ ಸಹಾಯಕ ಸೇವೆಗಳು)ಯು ಪ್ರಸ್ತಾಪಿತ ಜಮೀನಿಗೆ ಅಗತ್ಯವಿರುವ ರೂ.16,28,818/-ಗಳ ಅನುದಾನವನ್ನು 2021-22ನೇ ಸಾಲಿನ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಬಂಡಾವಳ ವೆಚ್ಚದ ಲೆಕ್ಕ ಶೀರ್ಷಿಕೆ:4059-80-051-0-41-132-k-safe ಅಡಿ ಭರಿಸಲು ಸಹಮತಿ ನೀಡಿರುತ್ತದೆ.

4. ಮೇಲೆ ಓದಲಾದ (4)ರ ಪತ್ರದಲ್ಲಿ, ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ, ರವರು ಸದರಿ ನಿವೇಶನ ಖರೀದಿಸಲು ರೂ.16,28,818/- ಗಳನ್ನು ರಾಜ್ಯ ಖಜಾನೆ-2 ಮೂಲಕ Token Number:2103084350 UTR No:RBI0782267732406 ಅಡಿ, ದಿನಾಂಕ:18-03-2022 ರಂದು ಆರ್.ಟಿ.ಜಿ.ಎಸ್. ಮೂಲಕ ಕಾರ್ಯಪಾಲಕ ಇಂಜಿನಿಯರ್, ಹಾರಂಗಿ ನಾಲಾ ವಿಭಾಗ, ಕಾವೇರಿ ನೀರಾವರಿ ನಿಗಮ, ಸಾಲಿಗ್ರಾಮ ಇವರಿಗೆ ಪಾವತಿಸಲಾಗಿರುತ್ತದೆ ಎಂದು ತಿಳಿಸಿರುತ್ತಾರೆ.

5. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಜಸಂಇ 45 ಎಂಎಂಕೆ 2022,**
**ಬೆಂಗಳೂರು, ದಿನಾಂಕ:04-06-2022**

ಕಾವೇರಿ ನೀರಾವರಿ ನಿಗಮವು ವಿಧಿಸುವ ಷರತ್ತಿಗೊಳಪಟ್ಟು, ಮೈಸೂರು ಜಿಲ್ಲೆ, ಕೆ.ಆರ್.ನಗರ ತಾಲ್ಲೂಕು, ಸಾಲಿಗ್ರಾಮ ಹೋಬಳಿ, ಸಾಲಿಗ್ರಾಮ ಗ್ರಾಮದ ಸರ್ವೆ ನಂ.738/7 ರಲ್ಲಿ 1-00 ಎಕರೆ ಜಮೀನು ಹಾಗೂ ಇದರಲ್ಲಿರುವ ಕಟ್ಟಡಗಳ ಒಟ್ಟಾರೆ ಮೊತ್ತ ರೂ.16,28,818/- ಗಳನ್ನು ಕಾವೇರಿ ನೀರಾವರಿ ನಿಗಮಕ್ಕೆ ಕ್ರಯದ ಆಧಾರದ ಮೇಲೆ ಅಗ್ನಿಶಾಮಕ ಇಲಾಖೆ ಪಾವತಿಸಿದ್ದು, ಸದರಿ ಜಮೀನನ್ನು ಅಗ್ನಿಶಾಮಕ ಠಾಣೆ ಸ್ಥಾಪಿಸುವ ಮತ್ತು ಸಿಬ್ಬಂದಿ ವಸತಿ ಗೃಹ ನಿರ್ಮಾಣದ ಉದ್ದೇಶಕ್ಕಾಗಿ, ಅಗ್ನಿಶಾಮಕ ಇಲಾಖೆಗೆ ಹಸ್ತಾಂತರಿಸಲು ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಒಳಾಡಳಿತ ಇಲಾಖೆಯ ಟಿಪ್ಪಣಿ ಸಂಖ್ಯೆ:ಒಇ 20 ಕಅಸೇ 2019 ದಿನಾಂಕ:22-04-2022 ರಲ್ಲಿ ನೀಡಲಾದ ಸಹಮತಿ ಹಾಗೂ ಕಂದಾಯ ಇಲಾಖೆಯ ಆದೇಶ ಸಂಖ್ಯೆ:ಆರ್.ಡಿ 32 ಎಲ್.ಜಿ.ಪಿ 2019, ದಿನಾಂಕ:01-02-2021 ರಲ್ಲಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

04/06/2022
( ಮನೋಹರ ವೈ. ರೊಟ್ಟೆ)
ವಿಶೇಷ ಕರ್ತವ್ಯಾಧಿಕಾರಿ
ಜಲಸಂಪನ್ಮೂಲ ಇಲಾಖೆ

<u>ಪ್ರತಿಯನ್ನು:</u>

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕ ಪರಿಶೋಧನ), ಕರ್ನಾಟಕ, ಬೆಂಗಳೂರು.

2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಮೈಸೂರು.
4. ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ (ಪೋಲೀಸ್ ಸಹಾಯಕ ಸೇವೆಗಳು), ವಿಧಾನಸೌಧ
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

+++++